ಶ್ರೀ ಎಂ. ವೀರಪ್ಪ ಮೊಯಿಲಿ (ವಿದ್ಯಾ ಸಚಿವರು): ಮಾನ್ಯ ಅಧ್ಯಕ್ಷರೇ ಮಾನ್ಯ ಶಾಸಕರು ಎತ್ತಿದ ವಿಚಾರವನ್ನು ಮುಖ್ಯಮಂತ್ರಿಯವರ ಗಮನಕ್ಕೆ ತಂದು ಉತ್ತರವನ್ನು ಪ್ರತ್ಯೇಕವಾಗಿ ಒದಗಿಸಲಾಗುವುದು.

8. ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಕೊಠಡಿಗಳ ಕೊರತೆ ಇರುವುದು.

ಶ್ರೀ ಸಿ.ಆರ್ ಸಗೀರ್ ಅಹಮದ್ (ಚಿಕ್ಕಮಗಳೂರು): ಚಿಕ್ಕಮಗಳೂರು ನಗರದಲ್ಲಿ ದಿನೇದಿನೇ ಬೆಳೆಯುತ್ತಿರುವ ಜನಸಂಖ್ಯೆಯಂತೆ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚುತ್ತಿದ್ದು ಪಟ್ಟಣದಲ್ಲಿರುವ ಸರ್ಕಾರಿ ಪದವೀಪೂರ್ವ ಕಾಲೇಜು ಮತ್ತು ಸರ್ಕಾರಿ ಲಾಲ್‌ಬಹದ್ದೂರ್ ಶಾಸ್ತ್ರಿ ಪದವಿಪೂರ್ವ ಕಾಲೇಜಿಗೆ ಶಾಲಾ ಕೊಠಡಿಗಳ ಕೊರತೆ ಇದ್ದು ಕಳೆದ ಹತ್ತು ವರ್ಷಗಳಿಂದ ಯಾವುದೇ ಕೊಠಡಿ ನಿರ್ಮಾಣ ಆಗಿರುವುದಿಲ್ಲ. ಈ ಬೇಡಿಕೆ ಈಡೇರಿಸಲು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿರುತ್ತೇನೆ. ಈ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರದ ಕ್ರಮದ ಬಗ್ಗೆ ಉತ್ತರವನ್ನು ನಿರೀಕ್ಷಿಸುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ (ವಿದ್ಯಾ ಸಚಿವರು): ಮಾನ್ಯ ಅಧ್ಯಕ್ಷರೆ, ಚಿಕ್ಕಮಗಳೂರು ನಗರದಲ್ಲಿ ಎರಡು ಸರ್ಕಾರಿ ಸಂಯುಕ್ತ ಕಿರಿಯ ಕಾಲೇಜುಗಳು ಸ್ಥಾಪಿತವಾಗಿವೆ. ಸರ್ಕಾರಿ ಕಿರಿಯ ಕಾಲೇಜು ಚಿಕ್ಕಮಗಳೂರು ಇಲ್ಲಿ 650 ಪ್ರೌಢ ಶಾಲಾ ವಿದ್ಯಾರ್ಥಿಗಳು ಮತ್ತು 500 ಕಿರಿಯ ಕಾಲೇಜು ವಿದ್ಯಾರ್ಥಿಗಳು ಇದ್ದಾರೆ. ಈ ಕಾಲೇಜಿನಲ್ಲಿ ಹಾಲಿ ಇರುವ ಕೊಠಡಿಗಳ ಸಂಖ್ಯೆ 18. ಇನ್ನೂ ಹೆಚ್ಚುವರಿ 10 ಕೊಠಡಿಗಳು ಬೇಕಾಗಿದೆ ಎಂದು ಅಂದಾಜು ಮಾಡಲಾಗಿದೆ.

1990-91ನೇ ಸಾಲಿನಲ್ಲಿ ಚಿಕ್ಕಮಗಳೂರಿಗೆ ಇನ್ನೊಂದು ಸರ್ಕಾರಿ ಸಂಯುಕ್ತ ಕಿರಿಯ ಕಾಲೇಜು ಮಂಜೂರಾಗಿದೆ. ಇಲ್ಲಿ ಪ್ರೌಢಶಾಲಾ ವಿಭಾಗದಲ್ಲಿ 352 ವಿದ್ಯಾರ್ಥಿಗಳು ಮತ್ತು ಕಿರಿಯ ಕಾಲೇಜು ವಿಭಾಗದಲ್ಲಿ 30 ವಿದ್ಯಾರ್ಥಿಗಳು ಇರುತ್ತಾರೆ. ಈ ಕಾಲೇಜಿನಲ್ಲಿ ಹಾಲಿ ಇರುವ ಕೊಠಡಿಗಳ ಸಂಖ್ಯೆ 10. ಇದಕ್ಕೂ ಇನ್ನು ಮುಂದೆ ಹೆಚ್ಚುವರಿ ಕೊಠಡಿಗಳು ಬೇಕಾಗಬಹುದೆಂದು ಅಂದಾಜು ಮಾಡಲಾಗಿದೆ.

ರಾಜ್ಯದಲ್ಲಿರುವ ಎಲ್ಲಾ ಸಂಯುಕ್ತ ಕಾಲೇಜುಗಳ ಹಿಂದಿನ ಪ್ರೌಢಶಾಲಾ ಕಟ್ಟಡಗಳಲ್ಲೇ ಸ್ಥಾಪಿತವಾಗಿ ನಡೆಯುತ್ತಿವೆ. ಈ ಕಾಲೇಜುಗಳಿಗೆ ಒಟ್ಟು 987 ಕೊಠಡಿಗಳ ಅವಶ್ಯಕತೆ ಇದ್ದು, ಇದಕ್ಕೆ 5 ಕೋಟಿ ರೂಪಾಯಿಗಳು ಬೇಕಾಗುತ್ತದೆ. ಈ ಎಲ್ಲಾ ಕಾಲೇಜುಗಳಿಗೆ ಹಂತಹಂತವಾಗಿ ಶಾಲಾ ಕೊಠಡಿಗಳನ್ನು ನಿರ್ಮಿಸುವ ಕಾರ್ಯಕ್ರಮ ಜಾರಿಯಲ್ಲಿದ್ದು, 1990-91ರಲ್ಲಿ ಇದರ ಬಾಬ್ತು 37.70 ಲಕ್ಷ ರೂಪಾಯಿಗಳನ್ನು ಯೋಜನಾ ಆಯವ್ಯಯದಲ್ಲಿ ಒದಗಿಸಲಾಗಿದೆ. ಹಾಗೆಯೇ ಮುಂದಿರುವ ಆರ್ಥಿಕ ವರ್ಷದಲ್ಲಿ 76.00 ಲಕ್ಷ ರೂಪಾಯಿಗಳನ್ನು ಒದಗಿಸಲಾಗಿದೆ.

ಚಿಕ್ಕಮಗಳೂರಿನ ಕಾಲೇಜುಗಳಿಗೆ 91-92ರ ಸಾಲಿನಲ್ಲಿ ಶಿಕ್ಷಣ ಇಲಾಖೆಯ ಯೋಜನಾ ಆಯವ್ಯಯದ ಒಟ್ಟಾರೆ ಉಳಿತಾಯದಲ್ಲಿ ಅಧಿಕ ಕೊಠಡಿಗಳನ್ನು ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

9. ಸ್ವಯಂ ಸೇವಾ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಅಂಗವಿಕಲರಿಗೆ ವೇತನ ನೀಡುತ್ತಿರುವುದು.

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಮಂಗಳೂರು): ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅನುದಾನ ಪಡೆಯುತ್ತಿರುವ ಅಂಗವಿಕಲರ ಕಲ್ಯಾಣಕ್ಕಾಗಿ ದುಡಿಯುತ್ತಿರುವ ಸ್ವಯಂಸೇವಾ ಸಂಸ್ಥೆಗಳಿಗೆ 1982ರ ಅನುದಾನ ಸಂಹಿತೆ (ಗ್ರಾಂಟ್-ಇನ್-ಏಡ್ ಕೋಡ್) ಪ್ರಕಾರ ಅವರ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಸಿಬ್ಬಂದಿಗಳಿಗೆ ನೀಡುವ ವೇತನ ಅನ್ವಯವಾಗುತ್ತದೆ. ಶಿಕ್ಷಣ ಇಲಾಖೆಯ ನೌಕರರಿಗೆ

ಸರಕಾರ ತನ್ನ ಜಿ.ಓ.ನಂ. ಎಫ್‌ಡಿ. 22 ಎಸ್‌ಆರ್‌ಪಿ 87 ದಿನಾಂಕ 8-3-87ರಂತೆ ದಿನಾಂಕ 1-1-87 ರಿಂದ ಪರಿಷ್ಕೃತ ವೇತನ ಶ್ರೇಣಿ ಮತ್ತು ತುಟ್ಟಿಭತ್ಯ ಮಂಜೂರು ಮಾಡಿದೆ. ಇದು ಅಂಗವಿಕಲರ ಕಲ್ಯಾಣಕ್ಕಾಗಿ ದುಡಿಯುತ್ತಿರುವ ಸಂಸ್ಥೆಗಳಿಗೂ ನೀಡಬೇಕಾದ್ದರಿಂದ ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿರ್ದೇಶಕರು ತಮ್ಮ ಸುತ್ತೋಲೆ ಸಕಇ-ಅವಿವಿ-1-ಅ.ಸಂಸ್ಥೆ ಪ.ವೇ-87-88 ದಿನಾಂಕ 20-7-1987ರಂತೆ ಅಗತ್ಯವುಳ್ಳ ಮಾಹಿತಿ ನೀಡಲು ಅನುದಾನ ಪಡೆಯುತ್ತಿರುವ ಎಲ್ಲಾ ಅಂಗವಿಕಲ ಕಲ್ಯಾಣ ಸ್ವಯಂ ಸೇವಾ ಸಂಸ್ಥೆಗಳಿಗೂ ತಿಳಿಸಿರುತ್ತಾರೆ. ಆ ಪ್ರಕಾರ ಎಲ್ಲಾ ಸಂಸ್ಥೆಗಳೂ ಅಗತ್ಯವುಳ್ಳ ಮಾಹಿತಿಯನ್ನು ಸೂಚಿತ ನಮೂನೆಯಲ್ಲಿ ಕಳುಹಿಸಿರುತ್ತಾರೆ. 1-8-1988ರಂದು ಅಂಗವಿಕಲರ ಕಲ್ಯಾಣ ಇಲಾಖೆ ಸಹ ಅಂದಿನ ಮುಖ್ಯಮಂತ್ರಿ ಶ್ರೀ ರಾಮಕೃಷ್ಣ ಹೆಗಡೆ ಅವರಿಂದ ಉದ್ಘಾಟಿಸಲಾಯಿತು. ಇಷ್ಟೆಲ್ಲಾ ಆದರೂ ಅಂಗವಿಕಲರ ಕಲ್ಯಾಣ ಸಂಸ್ಥೆಗಳ ನೌಕರರ ಗೋಳು ಕೇಳುವವರೇ ಇಲ್ಲ. ಅವರಿಗೆ ಪರಿಷ್ಕೃತ ವೇತನ, ತುಟ್ಟಿಭತ್ಯ ಸಿಕ್ಕಿಲ್ಲ. ಇತರ ಇಲಾಖೆಗಳ ನೌಕರರಿಗೆ 9 ಬಾರಿ ಪುನಃ ಪುನಃ ಸಿಕ್ಕಿದೆ. ಆದರೆ ಈ ಇಲಾಖೆಯ ನೌಕರರು ಏನು ಪಾಪ ಮಾಡಿದ್ದಾರೆ?

ಅವರಿಗೆ ಆದಷ್ಟು ಬೇಗ 18-3-87 ರಿಂದ 7-7-1990ರವರೆಗಿನ 9 ಸರ್ಕಾರಿ ಆಜ್ಞೆಗಳ ಪ್ರಕಾರ ನೀಡಬೇಕಾದ ಸವಲತ್ತುಗಳನ್ನು ಕೂಡಲೇ ಕೊಡಿಸಬೇಕೆಂದು ಒತ್ತಾಯಿಸುತ್ತೇನೆ.

ಶ್ರೀ ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ ಸರ್ಕಾರಿ ಆದೇಶ ಸಂಖ್ಯೆ: ಸಕಾಕ 216 ಪಿಹೆಚ್ಪಿ. 89ರ ದಿನಾಂಕ 28-9-1989ರಲ್ಲಿ ಸರ್ಕಾರ ಅನುದಾನ ಪಡೆಯುತ್ತಿರುವ ಅಂಗವಿಕಲರ ಸೇವಾ ಸಂಸ್ಥೆಗಳಲ್ಲಿನ ನೌಕರರ ವೇತನ ಶ್ರೇಣಿ 1986 ಜುಲೈ 1 ರಿಂದ ಸರ್ಕಾರ ಪರಿಷ್ಕರಿಸಲು ಕರ್ನಾಟಕ ನಾಗರೀಕ ಸೇವೆಗಳು (ಪರಿಷ್ಕೃತ ವೇತನ) ನಿಯಮಾವಳಿ 1987 ಉಪಬಂಧಗಳ ಪ್ರಕಾರ ಈ ನೌಕರರ ವೇತನವನ್ನು ಪರಿಷ್ಕೃತ ವೇತನ ಶ್ರೇಣಿಯಲ್ಲಿ ದಿನಾಂಕ 1-7-1986ರಿಂದ ಕಾಲ್ಪನಿಕವಾಗಿ ನಿಗದಿಗೊಳಿಸಿ ಹಣಕಾಸಿನ ಪ್ರಯೋಜನವನ್ನು ದಿನಾಂಕ : 1-7-1987ರಿಂದ ವೇತನ ನೀಡಲು ಸರ್ಕಾರಿ ಆದೇಶದಲ್ಲಿ ಸ್ಪಷ್ಟ ಆದೇಶವನ್ನು ನೀಡಲಾಗಿದೆ.

ಅನುದಾನ ಸಂಹಿತೆ ನಿಯಮ (16)ರ ಪ್ರಕಾರ ಮಾನ್ಯತೆ ಪಡೆದಿರುವ ಸಂಸ್ಥೆಗಳಿಗೆ ಅನುಧಾನ ನೀಡಲು ಅವಕಾಶವಿರುತ್ತದೆ. ಕೆಲವೊಂದು ಸಂಸ್ಥೆಗಳು ಸರ್ಕಾರದಿಂದ ಮಾನ್ಯತೆಯನ್ನು ಹೊಂದಿಲ್ಲದಿದ್ದರು ಅನುದಾನ ಸಂಹಿತೆ ಜಾರಿಗೆ ಬರುವ ಹಿಂದಿನಿಂದಲು ಅನುದಾನ ಪಡೆಯುತ್ತಿದೆಯೆಂದು ತಿಳಿದುಬಂದಿದೆ.

ಮೇಲಿನ ಅನುದಾನ ಸಂಹಿತ (17) ಉಪನಿಯಮ (ಬಿ) ಪ್ರಕಾರ ಈ ಸಂಸ್ಥೆಗಳಲ್ಲಿ ನೇಮಕ ಮಾಡಿರುವ ನೇಮಕಾತಿಯನ್ನು ನಿರ್ದೇಶಕರು, ಅಂಗವಿಕಲರ ಕಲ್ಯಾಣ ಇಲಾಖೆ ಇವರು ಅನುಮೋದಿಸಿರಬೇಕು. ಅಂಗವಿಕಲರ ಕಲ್ಯಾಣ ಇಲಾಖಾ ನಿರ್ದೇಶಕರು ತಮ್ಮ ವರದಿಯಲ್ಲಿ ಕೆಲವೊಂದು ಸಂಸ್ಥೆಗಳು ಇಂತಹ ನೇಮಕಾತಿಯ ಬಗ್ಗೆ ಇಲಾಖೆಯ ಅನುಮೋದನೆಯನ್ನು ಪಡೆದಿಲ್ಲವೆಂದು ತಿಳಿಸಿರುವರು.

ಮೇಲೆ ತಿಳಿಸಿರುವ ನಿಯಮಾನುಸಾರ ಪರಿಷ್ಕೃತ ವೇತನವು ಇಲಾಖೆಯಿಂದ ಮಾನ್ಯತೆಯನ್ನು ಪಡೆದಿರುವ ಸಂಸ್ಥೆಗಳಿಗೆ ಮಾತ್ರ ಅನ್ವಯವಾಗುತ್ತದೆ.

ಅನುದಾನ ಸಂಹಿತ ಜಾರಿಗೆ ಬರುವ ಹಿಂದಿನಿಂದಲೂ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಈ ಪರಿಷ್ಕೃತ ವೇತನ ಲಾಭ ಅನ್ವಯವಾಗಬೇಕಾದರೆ ಅಂತಹ ಸಂಸ್ಥೆಗಳು ಇಲಾಖೆಯ ಅನುದಾನ ಸಂಹಿತ ನಿಯಮಾವಳಿ ಪ್ರಕಾರ ಮಾನ್ಯತೆಯನ್ನು ಪಡೆಯಬೇಕು. ತದನಂತರ ಅಂತಹ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದ

ನೇಮಕಾತಿ ಬಗ್ಗೆಯೂ ಸಹ ಇಲಾಖೆಯ ಅನುಮೋದನೆ ಪಡೆದು ನಂತರ ಪರಿಷ್ಕೃತ ವೇತನ ಸೌಲಭ್ಯಪಡೆಯಲು ಅರ್ಹವಾಗುತ್ತವೆ.

ಇಲಾಖೆಯಿಂದ ಮಾನ್ಯತೆಯನ್ನು ಪಡೆಯದೇ ಇರುವ ಅಂತಹ ಸಂಸ್ಥೆಗಳು ಮತ್ತು ಅಂತಹ ಸಂಸ್ಥೆಗಳಲ್ಲಿ ನೇಮಕಾತಿ ಮಾಡಿರುವ ಬಗ್ಗೆ ಇಲಾಖೆಯ ಅನುಮೋದನೆ ಪಡೆಯದಿದ್ದರೇ ಅಂತಹ ಸಂಸ್ಥೆಗಳು ಮಾನ್ಯತೆ ಪಡೆಯಲು ಇಲಾಖೆಗೆ ಅರ್ಜಿಯನ್ನು ಸಲ್ಲಿಸಿ ಪರಿಷ್ಕೃತ ವೇತನದ ಸೌಲಭ್ಯವನ್ನು ಪಡೆದುಕೊಳ್ಳಬಹುದು.

4. ಶಾಸನ ರಚನಾ ಕಾರ್ಯಕಲಾಪಗಳು

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 1991 ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, ಮುಖ್ಯಮಂತ್ರಿಯವರ ಪರವಾಗಿ 1991ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್ : ಪ್ರಸ್ತಾವ ಏನೆಂದರೆ 1991ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, 1919ನೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್ಮನ್ : ವಿಧೇಯಕವನ್ನು ಮಂಡಿಸಲಾಗಿದೆ.

2. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶ ಯೋಜನಾ (ತಿದ್ದುಪಡಿ) ವಿಧೇಯಕ 1991.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಯವರು): ಮಾನ್ಯ ಅಧ್ಯಕ್ಷರೇ 1991ನೇ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶ ಯೋಜನಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್ : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶ ಯೋಜನಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟ ಮತ್ತು ಅನುಮತಿ ನೀಡಲಾಯಿತು.

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಯವರು): ಮಾನ್ಯ ಅಧ್ಯಕ್ಷರೇ 1991ನೇ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶ ಯೋಜನಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮುಂಡಿಸುತ್ತೇನೆ.

ಛೇರ್ಮನ್ : ವಿಧೇಯಕವನ್ನು ಮಂಡಿಸಲಾಗಿದೆ ಈಗ ಸಭೆಯು ಮೇಲೆದ್ದು ಮತ್ತೆ 2 ಗಂಟೆ 40 ನಿಮಿಷಕ್ಕೆ ಸಮಾವೇಶಗೊಳ್ಳುವುದು.